ಕರ್ನಾಟಕ ಸರ್ಕಾರದ ನಡವಳಿಗಳು

**ಜಲ ಸಂಪನ್ಮೂಲ ಇಲಾಖೆ**

ವಿಷಯ:- ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ 66 ಸಂಖ್ಯೆಯ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಮೂಡಿ ಗ್ರಾಮದ ಹತ್ತಿರ ವರದಾ ನದಿಯಿಂದ ನೀರನ್ನೆತ್ತಿ ತುಂಬಿಸುವ ರೂ.285.00 ಕೋಟಿಗಳ ಮೂಡಿ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:- ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿ/ಮೂಡಿ-ಡಿಪಿಆರ್/2018-19/7439 ದಿನಾಂಕ:08.03.2019.

----***----

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಬೆಂಗಳೂರು ಇವರು, ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಕೆರೆಗಳಲ್ಲಿ ಮಳೆಯ ಅಭಾವದಿಂದ ನಿಗಧಿತ ಪ್ರಮಾಣದಲ್ಲಿ ನೀರಿನ ಸಂಗ್ರಹಣೆಯಾಗದೇ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ತೊಂದರೆಯಾಗಿರುವುದರಿಂದ ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ 66 ಸಂಖ್ಯೆಯ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಮೂಡಿ ಗ್ರಾಮದ ಹತ್ತಿರ ವರದಾ ನದಿಯಿಂದ ನೀರನ್ನೆತ್ತಿ ತುಂಬಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿರುತ್ತಾರೆ.

ಮುಂದುವರೆದು, ಸದರಿ ಯೋಜನೆಯ ವರದಿಯನ್ನು ದಿನಾಂಕ:06.12.2018 ರಂದು ಜರುಗಿದ ನಿಗಮದ 45ನೇ ಅಂದಾಜು ಪರಿಶೀಲನಾ ಸಮಿತಿಯ ಸಭೆಯಲ್ಲಿ ಸದರಿ ಯೋಜನಾ ವರದಿಯನ್ನು ಮಂಡಿಸಲಾಗಿ ಸಮಿತಿಯು ವರದಾ ನದಿಯಲ್ಲಿ 03 ತಿಂಗಳಲ್ಲಿ ಹರಿಯುವ ನೀರಿನಿಂದ ಯೋಜನೆಗೆ ಅವಶ್ಯವಿರುವ 0.35 ಟಿಎಂಸಿ ನೀರನ್ನು ಬಳಸಿ, ಸದರಿ ಭಾಗದಲ್ಲಿನ ಗ್ರಾಮಗಳ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರನ್ನು ಒದಗಿಸುವ ಮತ್ತು ಅಂತರ್ಜಲ ಮಟ್ಟ ವೃದ್ಧಿಸುವ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಲು ಶಿಫಾರಸ್ಸು ಮಾಡಿರುತ್ತದೆ. ಯೋಜನೆಯ ವಿವರವಾದ ಯೋಜನಾ ವರದಿಯನ್ನು ದಿನಾಂಕ:07.03.2019 ರಂದು ಜರುಗಿದ ನಿಗಮದ ನಿರ್ದೇಶಕರ ಮಂಡಳಿಯ 87ನೇ ಸಭೆಯಲ್ಲಿ ಮಂಡಿಸಲಾಗಿದ್ದು, ಮಂಡಳಿಯು ಸದರಿ ಪ್ರಸ್ತಾವನೆಗೆ ಅನುಮೋದನೆ ನೀಡಿರುತ್ತದೆ. ಸದರಿ ಯೋಜನೆಯನ್ನು ಚಾಲ್ತಿಯಲ್ಲಿರುವ 2018-19ನೇ ಸಾಲಿನ ದರಪಟ್ಟಿ ಅನ್ವಯ ರೂ.285.00 ಕೋಟಿಗಳಿಗೆ ತಯಾರಿಸಲಾಗಿದೆ ಎಂದು ವ್ಯವಸ್ಥಾಪಕ ನಿರ್ದೇಶಕರು, ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ 66 ಸಂಖ್ಯೆಯ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಮೂಡಿ ಗ್ರಾಮದ ಹತ್ತಿರ ವರದಾ ನದಿಯಿಂದ ನೀರನ್ನೆತ್ತಿ ತುಂಬಿಸುವ ಯೋಜನಾ ವರದಿಯನ್ನು 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿದ್ದು, ಸದರಿ ಮೂಡಿ ಯೋಜನಾ ವರದಿಯ ರೂ.285.00 ಕೋಟಿಗಳ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ರವರು ಕೋರಿರುತ್ತಾರೆ.

...2

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಗಿನಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 15 ಎಂಎಂಬಿ 2019, ಬೆಂಗಳೂರು,**
**ದಿನಾಂಕ:23.08.2019.**

ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ 66 ಸಂಖ್ಯೆಯ ಸಣ್ಣ ನೀರಾವರಿ/ಜಿಲ್ಲಾ ಪಂಚಾಯತ್ ಕೆರೆಗಳನ್ನು ಮೂಡಿ ಗ್ರಾಮದ ಹತ್ತಿರ ವರದಾ ನದಿಯಿಂದ ನೀರನ್ನೆತ್ತಿ ತುಂಬಿಸುವ ರೂ.285.00 ಕೋಟಿಗಳ ಮೂಡಿ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಂಖ್ಯೆ-5903 ದಿನಾಂಕ:14.08.2019 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

23/8/19

(ಶ್ರೀಹರಿ ಎಸ್.ಆರ್)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:-

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿಗಳು (ಸಚಿವ ಸಂಪುಟ) ಪ್ರಕರಣ ಸಂ:ಸಿ:478/2019 ದಿನಾಂಕ:14.08.2019.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ಬೆಂಗಳೂರು.
6. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ ಶಿವಮೊಗ್ಗ.
7. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.